ಈ) 1991ರ ಆಗಸ್ಟ್ ತಿಂಗಳ ಕೊನೆಯವರೆವಿಗೂ 330 ರೋಗಿಗಳನ್ನು ಪರೀಕ್ಷಿಸಲಾಗಿದೆ.

ಉ) ಉದ್ಭವಿಸುವುದಿಲ್ಲ.

ಊ) ಹೌದು.

ಋ) ಉದ್ಭವಿಸುವುದಿಲ್ಲ.

ಬಂಗಾರಪೇಟೆ ತಾಲ್ಲೂಕು ದೊಡ್ಡ ಕಂಬಳಿಯ ಕುಟುಂಬ ಕಲ್ಯಾಣ ಉಪಕೇಂದ್ರ ಮುಚ್ಚಿರುವುದು

2337 - ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಂಗಾರಪೇಟೆ ತಾಲ್ಲೂಕು ದೊಡ್ಡ ಕಂಬಳಿಯ ಕುಟುಂಬ ಕಲ್ಯಾಣ ಉಪಕೇಂದ್ರವು ಮುಚ್ಚಿದೆಯೆ?

ಆ) ಹಾಗಿದ್ದಲ್ಲಿ ಯಾವಾಗಿನಿಂದ ಮುಚ್ಚಿತ್ತು. ಅದಕ್ಕೆ ಕಾರಣಗಳೇನು?

ಇ) ಸರ್ಕಾರವು ಇದರ ಬಗ್ಗೆ ತೆರೆಯುವುದಕ್ಕೆ ಏನು ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ಜಿ. ಪುಟ್ಟಸ್ವಾಮಿ ಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ, ಕಟ್ಟಡ ದುರಸ್ಥಿ ಮಾಡಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪೀಣ್ಯ ಕೈಗಾರಿಕಾ ಪ್ರದೇಶದ ವಿಸ್ತೀರ್ಣ

2342 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ದಿನಾಂಕ 14-8-91ರೊಳಗೆ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಉದ್ಯಮದಾರರಿಗಾಗಿ ಎಷ್ಟು ವಿಸ್ತೀರ್ಣ ಜಮೀನು ಲಭ್ಯವಿದೆ.

ಆ) ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಸ್ವಂತ ಉಪಯೋಗಕ್ಕೊಸ್ಕರ ಎಷ್ಟು ಜಮೀನು ಕಾದಿರಿಸಲಾಗಿದೆ?

ಇ) ಯಾವ ಆಧಾರದ ಮೇಲೆ ಹಾಗೂ ಆದ್ಯತೆ ಮೇರೆಗೆ ಹಂಚಿಕೆ ಮಾಡಲಾಗಿದೆ?

ಶ್ರೀ ನಸೀರ್ ಅಹಮದ್ (ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು):

ಅ) 3 ಪ್ಲಾಟ್ ಸುಮಾರು 4.00 ಎಕರೆಗಳು.

ಆ) 5.18 ಎಕರೆ ಜಮೀನು.

ಇ) ಮಂಜೂರಾತಿಯ ಅರ್ಜಿಯ ದಿನಾಂಕ ಹಾಗೂ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪಿಸಲು ಉದ್ದಿಮೆಯ ಸೂಕ್ತತೆ ಮೇರೆಗೆ ಪರಿಗಣಿಸಲಾಗುವುದು.

ಬೀದರ್ ಜಿಲ್ಲೆಯಲ್ಲಿ ಸ್ಥಾಪಿಸಲಾದ ಕೈಗಾರಿಗಳ ಸಂಖ್ಯೆ.

2328 - ಶ್ರೀ ನಾರಾಯಣ ರಾವ್ ಮನಹಳ್ಳಿ (ಬೀದರ್) : ಮಾನ್ಯ ಸಣ್ಣ ಕೈಗಾರಿಕೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?